ಈ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಈ ಬಗ್ಗೆ ಸುಪ್ರೀಂ ಕೋರ್ಟಿನಲ್ಲಿ ಮರುಪರಿಶೀಲನಾ ಅರ್ಜಿಯನ್ನು ಸಲ್ಲಿಸುವುದೆ?

ಶ್ರೀ ಆರ್. ರೋಷನ್ ಬೇಗ್ (ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಸರ್ಕಾರಿ ಜಾಹೀರಾತಿನಲ್ಲಿ ಭಾರತದ ಮಾನ್ಯ ರಾಷ್ಟ್ರಪತಿಗಳು ಮಾನ್ಯ ರಾಷ್ಟ್ರಪತಿಗಳು ಮಾನ್ಯ ಪ್ರಧಾನಮಂತ್ರಿಗಳು ಹಾಗೂ ಸರ್ವೋಚ್ಚ ನ್ಯಾಯಾಲಯದ ಮಾನ್ಯ ಮುಖ್ಯ ನ್ಯಾಯಮೂರ್ತಿಗಳ ಭಾವ ಚಿತ್ರಗಳನ್ನು ಮಾತ್ರ ಪ್ರಕಟಿಸಬಹುದಾಗಿದೆ.

ಇ) ಹೌದು

ಈ) ಈ ಬಗ್ಗೆ ರಾಜ್ಯ ಸರ್ಕಾರದ ವತಿಯಿಂದ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಈಗಾಗಲೇ ಮರುಪರಿಶೀಲನಾ ಅರ್ಜಿಯನ್ನು ಸಲ್ಲಿಸಲಾಗಿದೆ.

ಡಾ॥ ರಾಜ್‌ಕುಮಾರ್ ಹೆಸರಿನಲ್ಲಿ ಅಧ್ಯಯನ ಪೀಠ ಸ್ಥಾಪನೆ

3154 (3571); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಪ್ರಸಕ್ತ ಸಾಲಿನಲ್ಲಿ ಯಾವ ವಿಶ್ವವಿದ್ಯಾಲಯಗಳಲ್ಲಿ ಹೊಸ ಅಧ್ಯಯನ ಪೀಠಗಳನ್ನು ಯಾರ ಹೆಸರಿನಲ್ಲಿ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ;

ಆ) ಡಾ॥ ರಾಜ್‌ಕುಮಾರ್‌ರವರು ಕನ್ನಡ ಚಿತ್ರರಂಗಕ್ಕೆ ಸಲ್ಲಿಸಿರುವ ಸೇವೆಯನ್ನು ಗೌರವಿಸಲು ಅವರ ಹೆಸರಿನಲ್ಲಿ ರಾಜ್ಯದ ಮೈಸೂರು ವಿಶ್ವವಿದ್ಯಾಲಯದಲ್ಲಾಗಲಿ ಅಥವಾ ಬೇರೆ ಯಾವುದೇ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠವನ್ನು ಸ್ಥಾಪಿಸುವ ಬಗ್ಗೆ ಸರ್ಕಾರ ಪರಿಶೀಲಿಸುವುದೇ;

ಇ) ಹಾಗಿದ್ದಲ್ಲಿ, ರಾಜ್ಯದ ಯಾವ ವಿಶ್ವವಿದ್ಯಾಲಯದಲ್ಲಿ ಇವರ ಹೆಸರಿನಲ್ಲಿ ಅಧ್ಯಯನ ಪೀಠವನ್ನು ಸ್ಥಾಪಿಸಲಾಗುವುದು?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ)

1. ಮೈಸೂರು ವಿಶ್ವವಿದ್ಯಾಲಯದಲ್ಲಿ ಶ್ರೀ ಯು.ಆರ್.ಅನಂತಮೂರ್ತಿ ಅಧ್ಯಯನ ಪೀಠ ಹಾಗೂ ನಂಜನಗೂಡಿನ ಹಿಮ್ಮಾವು ಗ್ರಾಮದಲ್ಲಿ ನಳಂದ ಅಧ್ಯಯನ ಪೀಠವನ್ನು ಸ್ಥಾಪಿಸಲು ಸರ್ಕಾರದ ತಾತ್ವಿಕ ಅನುಮೋದನೆಯನ್ನು ನೀಡಲಾಗಿದೆ.
2. ಮಂಗಳೂರು ವಿಶ್ವವಿದ್ಯಾಲಯದಲ್ಲಿ ರಾಣಿ ಅಬ್ಬಕ್ಕ ಅಧ್ಯಯನ ಪೀಠ ಮತ್ತು ನೆಹರು ಚಿಂತನ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ತಾತ್ವಿಕ ಅನುಮೋದನೆಯನ್ನು ನೀಡಲಾಗಿದೆ.

ಆ) ಮತ್ತು ಇ) ಕನ್ನಡ ವಿಶ್ವವಿದ್ಯಾಲಯದಲ್ಲಿ ಡಾ॥ ರಾಜ್‌ಕುಮಾರ್ ಅಧ್ಯಯನ ಪೀಠವನ್ನು ಈಗಾಗಲೇ ಸ್ಥಾಪಿಸಲಾಗಿದೆ.

ಬಿಬಿಎಂಪಿ ವ್ಯಾಪ್ತಿಯ ಸರ್ಕಾರಿ ಶಾಲೆಗಳು

3155 (3564); ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ)

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರದೇಶಗಳಲ್ಲಿರುವ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಸಂಖ್ಯೆ ಎಷ್ಟು ಮತ್ತು ಅವುಗಳಲ್ಲಿ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ಸದರಿ ಶಾಲೆಗಳ ಸ್ಥಿತಿಗತಿ ಮತ್ತು ಒದಗಿಸಿ ಕೊಡಲಾಗಿರುವ ಮೂಲ ಸೌಲಭ್ಯಗಳು ಹಾಗೂ ಈ ಕುರಿತಾದ ಕೊರತೆ ಎದುರಿಸುತ್ತಿರುವ